**Akashvani : Bangalore**
**Regional Bulletin In Kannada**
**30.03.2026 / 14.30 hrs**
ಆಕಾಶವಾಣಿ ಬೆಂಗಳೂರು
ಪ್ರದೇಶ ಸಮಾಚಾರ
**30.03.2026 / 14.30 hrs**
**<><*<><>*><>**

<u>ಮುಖ್ಯಾಂಶಗಳು</u>

**೧. ವಿಧಾನಸಭಾ ಉಪಚುನಾವಣೆ; ಬಾಗಲಕೋಟೆಯಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ, ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಅಭ್ಯರ್ಥಿಗಳ ಪರ ಮತಯಾಚನೆ**

**೨. ರಾಯಚೂರಿನ ಮಸ್ಕಿಯಲ್ಲಿರುವ ಅಶೋಕನ ಶಿಲಾಶಾಸನ ಸಂರಕ್ಷಿಸುವಂತೆ ರಾಜ್ಯಸಭೆಯಲ್ಲಿ ಸುಧಾಮೂರ್ತಿ ಮನವಿ**

**೩. ಮಂಗಳೂರು, ತುಮಕೂರಿನಲ್ಲಿ ನೂತನ ಯುವ ಪೀಳಿಗೆಯ ಅಂಚೆ ಕಚೇರಿ ಲೋಕಾರ್ಪಣೆ**

**೪. ನವಮಂಗಳೂರು ಬಂದರು ಮಂಡಳಿಯ ೯ನೇ ಲಂಗರುದಾಣದ ಉನ್ನತೀಕರಣಕ್ಕೆ ಕೇಂದ್ರ ಸರ್ಕಾರ ನಿರ್ಧಾರ**

**೫. ರಾಜ್ಯದೆಲ್ಲೆಡೆ ಭಗವಾನ್ ಮಹಾವೀರ ಜಯಂತಿ ಆಚರಣೆ; ಶ್ರೇಷ್ಠ ದಾರ್ಶನಿಕನ ಸ್ಮರಿಸಿದ ಜನತೆ**

**<><*<><>*><>**

ಬಾಗಲಕೋಟ ವಿಧಾನಸಭೆ ಕ್ಷೇತ್ರದ ಸುತಾರ ಗುಂಡ ಗ್ರಾಮದಲ್ಲಿ ನಡೆದ ಪ್ರಚಾರ ಸಭೆಯಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಕಾಂಗ್ರೆಸ್ ಅಭ್ಯರ್ಥಿ ಉಮೇಶ್ ಮೇಟಿ ಪರ ಮತ ಯಾಚಿಸಿದರು. ಸಚಿವರಾದ ಆರ್.ಬಿ. ತಿಮ್ಮಾಪುರ್, ಬೈರತಿ ಸುರೇಶ್, ಶಿವಾನಂದ ಪಾಟೀಲ್ ಸೇರಿದಂತೆ ಪಕ್ಷದ ಶಾಸಕರು, ಮುಖಂಡರು ಪ್ರಚಾರ ಸಭೆಯಲ್ಲಿ ಭಾಗವಹಿಸಿದ್ದರು. ಇನ್ನೊಂದೆಡೆ ಬಿಜೆಪಿ ಅಭ್ಯರ್ಥಿ ವೀರಣ್ಣ ಚರಂತಿಮಠ ಪರವಾಗಿ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಮನೆ ಮನೆಗೆ ತೆರಳಿ ಮತಯಾಚಿಸಿದರು. ಈ ವೇಳೆ ಮಾತನಾಡಿದ ಅವರು, ಬಾಗಲಕೋಟೆ ಉಪಚುನಾವಣೆಯ ವಾತಾವರಣ ಬಿಜೆಪಿ ಪರವಾಗಿದೆ ಎಂದು ಅಭಿಪ್ರಾಯಪಟ್ಟಿದ್ದಾರೆ. ಮಾಜಿ ಉಪಮುಖ್ಯಮಂತ್ರಿ ಗೋವಿಂದ ಕಾರಜೋಳ ಸೇರಿದಂತೆ ಬಿಜೆಪಿ ಯ ಹಿರಿಯ ನಾಯಕರು ಪ್ರಚಾರದಲ್ಲಿ ಪಾಲ್ಗೊಂಡಿದ್ದರು.

**<><*<><>*><>**

ಸಾಮ್ರಾಟ್ ಅಶೋಕ ಸೇರಿದಂತೆ ವಿವಿಧ ಚಕ್ರವರ್ತಿಗಳ ಶಿಲಾಶಾಸನಗಳನ್ನು ಮುಂದಿನ ಪೀಳಿಗೆಗೆ ತಿಳಿಸುವ ಸಲುವಾಗಿ ಅವುಗಳನ್ನು ಸಂರಕ್ಷಿಸಲು ಕ್ರಮ ತೆಗೆದುಕೊಳ್ಳುವಂತೆ ಸದಸ್ಯೆ ಸುಧಾ ಮೂರ್ತಿ ರಾಜ್ಯಸಭೆಯಲ್ಲಿ ಇಂದು ಮನವಿ ಮಾಡಿದ್ದಾರೆ. ರಾಯಚೂರು ಜಿಲ್ಲೆ ಮಸ್ಕಿಯಲ್ಲಿರುವ ಅಶೋಕನ ಶಿಲಾಶಾಸನವು ಅತ್ಯಂತ ಮಹತ್ವದ ಐತಿಹಾಸಿಕ ಆಧಾರವಾಗಿದೆ, ಏಕೆಂದರೆ ಇದು ಚಕ್ರವರ್ತಿಯನ್ನು ನೇರವಾಗಿ 'ದೇವನಾಂಪ್ರಿಯ ಅಶೋಕ' ಎಂದು ಉಲ್ಲೇಖಿಸಿದ ಮೊದಲ ಶಾಸನವಾಗಿದೆ. ಈ ಶಾಸನವು ಪ್ರಕೃತ ಭಾಷೆ ಮತ್ತು ಬ್ರಾಹ್ಮಿ

ಲಿಪಿಯಲ್ಲಿದೆ. ಇದು ಬೌದ್ಧ ಧರ್ಮದ ಪ್ರಸಾರ ಮತ್ತು ಮೌರ್ಯರ ಇತಿಹಾಸವನ್ನು ತಿಳಿಸುತ್ತದೆ. ಇದೇ ರೀತಿ ಹಲವೆಡೆಗಳಲ್ಲಿ ಶಿಲಾಶಾಸನವಿದ್ದು, ಅವುಗಳನ್ನು ಯಾವುದಾದರೂ ರೂಪದಲ್ಲಿ ಸಂರಕ್ಷಿಸಿ ಇಡುವ ಅಗತ್ಯವಿದೆ ಎಂದು ಪ್ರತಿಪಾದಿಸಿದ್ದಾರೆ.

<><*<><>*><>

ಮಂಗಳೂರು ವಿಭಾಗದ ಅಂಚೆ ಇಲಾಖೆಯಿಂದ ರಾಷ್ಟ್ರೀಯ ತಂತ್ರಜ್ಞಾನ ಸಂಸ್ಥೆಯ ಸುರತ್ಕಲ್ ಆವರಣದಲ್ಲಿ ನೂತನ ಝೆನ್-ಝಿ ಅಂಚೆ ಕಚೇರಿಯನ್ನು ಉದ್ಘಾಟಿಸಲಾಯಿತು. ಇದು ಕರ್ನಾಟಕದ ನಾಲ್ಕನೇ ಝೆನ್-ಝಿ ಅಂಚೆ ಕಚೇರಿಯಾಗಿದೆ. ವಿದ್ಯಾರ್ಥಿಗಳು ಮತ್ತು ಶೈಕ್ಷಣಿಕ ಸಂಸ್ಥೆಗಳಿಗೆ ಸೇವೆ ಸಲ್ಲಿಸಲು ಈ ಅಂಚೆ ಕಚೇರಿಯನ್ನು ವಿನ್ಯಾಸಗೊಳಿಸಲಾಗಿದೆ. ಇನ್ನೊಂದೆಡೆ, ತುಮಕೂರಿನಲ್ಲಿ ಮೊಟ್ಟ ಮೊದಲ ನೂತನ ಪೀಳಿಗೆಯ ಅಂಚೆ ಕಚೇರಿಯನ್ನು ಗೃಹ ಸಚಿವ ಡಾ.ಜಿ.ಪರಮೇಶ್ವರ್ ಉದ್ಘಾಟಿಸಿದರು. ಸಿದ್ಧಾರ್ಥ ವೈದ್ಯಕೀಯ ಕಾಲೇಜು ಆವರಣದಲ್ಲಿ ಅಂಚೆ ಕಚೇರಿ ಉದ್ಘಾಟಿಸಿ ಮಾತನಾಡಿದ ಅವರು, ಸುಧಾರಿತ ಮೂಲ ಸೌಕರ್ಯ ಮತ್ತು ಡಿಜಿಟಲ್, ವೇಗವಾದ, ಪಾರದರ್ಶಕ ಮತ್ತು ಸುಲಭ ಸೇವೆಗಳನ್ನು ಒದಗಿಸಲು ಅನುಕೂಲಕರವಾಗಿದೆ ಎಂದು ಹೇಳಿದ್ದಾರೆ. ೧೦೦ ವರ್ಷಗಳಿಗಿಂತ ಹೆಚ್ಚಿನ ಕಾಲ ಸೇವೆಯನ್ನು ಒದಗಿಸಿರುವ ಅಂಚೆ ಇಲಾಖೆ ಈಗಿನ ಕಾಲಕ್ಕೆ ತಕ್ಕಂತೆ ಸೇವೆಯನ್ನು ಒದಗಿಸುವ ನಿಟ್ಟಿನಲ್ಲಿ ಆಧುನೀಕರಣಗೊಳ್ಳುತ್ತಿದ್ದು, ಸಾರ್ವಜನಿಕರು ಸದುಪಯೋಗ ಪಡೆದುಕೊಳ್ಳಬೇಕು ಎಂದು ಕರೆ ನೀಡಿದರು.

<><*<><>*><>

ನವಮಂಗಳೂರು ಬಂದರು ಮಂಡಳಿಯ ೯ನೇ ಲಂಗರುದಾಣದ ಆಳ- ಬರ್ತ್ ಡ್ರಾಫ್ಟ್ ಅನ್ನು ಖಾಸಗಿ ಸಹಭಾಗಿತ್ವದೊಂದಿಗೆ ಪುನರ್ ಅಭಿವೃದ್ಧಿಗೊಳಿಸಲು ಕೇಂದ್ರ ಸರ್ಕಾರ ನಿರ್ಧರಿಸಿದೆ. ಸುಮಾರು ೪೩೮.೨೯ ಕೋಟಿ ರೂಪಾಯಿ ಅನುದಾದೊಂದಿಗೆ ಈ ಯೋಜನೆ ಕೈಗೆತ್ತಿಕೊಳ್ಳಲಾಗುವುದು ಎಂದು ಬಂದರು, ಹಡಗು ಸಚಿವಾಲಯ ತಿಳಿಸಿದೆ. ಈ ಯೋಜನೆಯು ಕಚ್ಚಾ ತೈಲ, ಪೆಟ್ರೋಲಿಯಂ ಉತ್ಪನ್ನಗಳು ಮತ್ತು ಎಲ್‌ಪಿಜಿಯಂತಹ ಬೃಹತ್ ಸರಕುಗಳನ್ನು ನಿರ್ವಹಿಸಲು ಬರ್ತ್ ಡ್ರಾಫ್ಟ್ ಸಂಖ್ಯೆ ೯ರ ಸಮಗ್ರ ಪುನರ್ ಅಭಿವೃದ್ಧಿಗೆ ಸಹಾಯಕವಾಗಲಿದೆ. ಈಗಿರುವ ಆಳವನ್ನು ೧೦.೫ ಮೀಟರ್‌ಗಳಿಂದ ೧೪ ಮೀಟರ್‌ವರೆಗೆ ಹೆಚ್ಚಿಸಲು ನಿರ್ಧರಿಸಲಾಗಿದೆ. ಭವಿಷ್ಯದ ಸಿದ್ಧ ವಿನ್ಯಾಸ ನಿಬಂಧನೆಯೊಂದಿಗೆ ೧೯.೮ ಮೀಟರ್‌ಗಳವರೆಗೆ ಹಾಗೂ ೨ ಲಕ್ಷ ಡಿಡಬ್ಲ್ಯುಟಿ ವರೆಗಿನ ಹಡಗುಳಿಗೆ ಸ್ಥಳಾವಕಾಶ ಕಲ್ಪಿಸಲು ಅನುವು ಮಾಡಿಕೊಡಲಿದೆ. ಇದರಲ್ಲಿ ಅತಿ ದೊಡ್ಡ ಅನಿಲ ವಾಹಕಗಳು ಸೇರಿವೆ ಎಂದು ಸಚಿವಾಲಯ ತಿಳಿಸಿದೆ.

<><*<><>*><>

ದಶಕಗಳಿಂದಲೂ ರಾಜ್ಯದಲ್ಲಿ ಯಶಸ್ವಿಯಾಗಿ ಜಾರಿಯಲ್ಲಿದ್ದ ತ್ರಿಭಾಷಾ ಸೂತ್ರ ತೆಗೆದು ಹಾಕಿರುವ ಶಿಕ್ಷಣ ಸಚಿವ ಮಧು ಬಂಗಾರಪ್ಪ ಅವರ ನಿರ್ಧಾರವು ರಾಜ್ಯದ ಶೈಕ್ಷಣಿಕ ಘನತೆಗೆ ದೊಡ್ಡ ಧಕ್ಕೆ ತಂದಿದೆ ಎಂದು ಉತ್ತರಕನ್ನಡ ಸಂಸದ ವಿಶ್ವೇಶ್ವರ ಹೆಗಡೆ ಕಾಗೇರಿ ಅಸಮಾಧಾನ ವ್ಯಕ್ತಪಡಿಸಿದ್ದಾರೆ. ಈ ಬಗ್ಗೆ ಪ್ರಕಟಣೆ ನೀಡಿರುವ ಅವರು, ತೃತೀಯ ಭಾಷೆಯ ಅಂಕಗಳನ್ನು ಸಂಪೂರ್ಣವಾಗಿ ಕೈಬಿಟ್ಟು ಕೇವಲ ಗ್ರೇಡ್ ಪದ್ಧತಿಗೆ ಸೀಮಿತಗೊಳಿಸಿರುವುದು

ಸರಿಯಲ್ಲ. ಒಟ್ಟು ಅಂಕಗಳನ್ನು ೬೨೫ ರಿಂದ ೫೨೫ ಕ್ಕೆ ಇಳಿಸಿರುವುದು ಶಿಕ್ಷಣ ಕ್ಷೇತ್ರದಲ್ಲಿ ಅರಾಜಕತೆ ಸೃಷ್ಟಿಸಲಿದೆ ಎಂದು ಎಚ್ಚರಿಸಿದ್ದಾರೆ. ಶಿಕ್ಷಣ ತಜ್ಞರ ಜೊತೆ ಯಾವುದೇ ಪೂರ್ವಭಾವಿ ಚರ್ಚೆ ನಡೆಸದೆ, ಏಕಾಏಕಿ ಇಂತಹ ಮಹತ್ವದ ಬದಲಾವಣೆಗಳನ್ನು ಜಾರಿಗೊಳಿಸುತ್ತಿರುವುದು ಸರಿಯಲ್ಲ ಎಂದು ತಿಳಿಸಿದ್ದಾರೆ.

<><*<><>*><>

ತ್ಯಾಗ, ಅಹಿಂಸೆಯ ಸಾಕಾರಮೂರ್ತಿ ಭಗವಾನ್ ಶ್ರೀ ಮಹಾವೀರ ಜಯಂತಿಯನ್ನು ಬೆಂಗಳೂರು ಗ್ರಾಮಾಂತರ ಜಿಲ್ಲೆಯ ದೊಡ್ಡಬಳ್ಳಾಪುರ, ದೇವನಹಳ್ಳಿ, ಹೊಸಕೋಟೆ, ನೆಲಮಂಗಲ ತಾಲೂಕುಗಳಲ್ಲಿ ಶ್ರದ್ಧಾ ಭಕ್ತಿ ಸಂಭ್ರಮಗಳಿಂದ ಆಚರಿಸಲಾಯಿತು. ದೊಡ್ಡಬಳ್ಳಾಪುರದಲ್ಲಿ ರಾಷ್ಟ್ರೀಯ ಹಬ್ಬಗಳ ಆಚರಣಾ ಸಮಿತಿ ವತಿಯಿಂದ ಮಹಾವೀರ ಜಯಂತಿ ಕಾರ್ಯಕ್ರಮದಲ್ಲಿ ಮಹಾವೀರರ ಭಾವಚಿತ್ರಕ್ಕೆ ಪುಷ್ಪ ನಮನ ಸಲ್ಲಿಸಿದ ತಹಸೀಲ್ದಾರ್ ಮಲ್ಲಪ್ಪ.ಕೆ.ಯರಗೋಳ ಮಾತನಾಡಿ, ಸತ್ಯಾನ್ವೇಷಣೆಗಾಗಿ ತಮ್ಮ, ಸುಖ, ವೈಭವಗಳನ್ನು ತ್ಯಾಗ ಮಾಡಿದ ಮಹಾವೀರರು ಶ್ರೇಷ್ಠ ದಾರ್ಶನಿಕರಾಗಿದ್ದರು. ಜಗತ್ತಿಗೆ ಶಾಂತಿ ಸೌಹಾರ್ದತೆಯನ್ನು ಬೋಧಿಸಿದ ಅವರ ತತ್ವಾದರ್ಶಗಳು ಇಂದಿನ ಸಮಾಜಕ್ಕೆ ಮಾದರಿಯಾಗಬೇಕಿದೆ ಎಂದು  ಸ್ಮರಿಸಿದರು.

<><*<><>*><>

ವಿಜಯಪುರದಲ್ಲಿ ಭಗವಾನ್ ಶ್ರೀ ಮಹಾವೀರ ಜಯಂತಿ ಕಾರ್ಯಕ್ರಮಕ್ಕೆ ಅಪರ ಜಿಲ್ಲಾಧಿಕಾರಿ ಡಾ.ಔದ್ರಾಮ ಚಾಲನೆ ನೀಡಿದರು. ಈ ವೇಳೆ ಮಾತನಾಡಿದ ಅವರು, ಭಗವಾನ್ ಮಹಾವೀರ,. ಈ ಸಮಾಜಕ್ಕೆ ನೀಡಿದ ಕೊಡುಗೆ ಅಪಾರವಾಗಿದೆ ಎಂದು ತಿಳಿಸಿದರು. ಮಹಾವೀರರು ಮನುಕುಲಕ್ಕೆ ಸಾರಿದ ಸತ್ಯ, ಅಹಿಂಸೆಯಂತಹ ಮೌಲ್ವಿಕ ತತ್ವಗಳು ಸಾರ್ವಕಾಲಿಕವಾಗಿದ್ದು, ಅವರ ಸಂದೇಶಗಳನ್ನು ಯುವಕರು

<><*<><>*><>

ದಕ್ಷಿಣ ಕಾಶಿ ಎಂದೇ ಖ್ಯಾತಿ ಪಡೆದಿರುವ ಪುರಾಣ ಪ್ರಸಿದ್ಧ ನಂಜನಗೂಡಿನ ಶ್ರೀಕಂಠೇಶ್ವರ ಸ್ವಾಮಿಯ ಗೌತಮ ಪಂಚ ಮಹಾರಥೋತ್ಸವವು ಇಂದು ಅತ್ಯಂತ ಸಡಗರ, ಸಂಭ್ರಮದಿಂದ ನೆರವೇರಿತು. ಇಂದು ಮುಂಜಾನೆ ೫:೫೦ ರಿಂದ ೬:೩೦ರ ಒಳಗಿನ ಶುಭ ಮೀನಾ ಲಗ್ನದಲ್ಲಿ ಶ್ರೀಕಂಠೇಶ್ವರ ಸ್ವಾಮಿಯ ಉತ್ಸವ ಮೂರ್ತಿಯನ್ನು ಶಾಸ್ತ್ರೋಕ್ತವಾಗಿ 'ಶ್ರೀಮನ್ ಮಹಾಗೌತಮ' ರಥಕ್ಕೆ ಏರಿಸಲಾಯಿತು. ಮುಂಜಾನೆಯೇ ಕಪಿಲಾ ನದಿಯಲ್ಲಿ ಪುಣ್ಯಸ್ನಾನ ಮಾಡಿದ ಸಾವಿರಾರು ಭಕ್ತರು, ರಥವನ್ನೆಳೆದು ಪುನೀತರಾದರು. ಮೈಸೂರು, ಮಂಡ್ಯ, ಹಾಸನ, ಚಾಮರಾಜನಗರ ಸೇರಿದಂತೆ ಹೊರರಾಜ್ಯಗಳಾದ ತಮಿಳುನಾಡು, ಕೇರಳ ಹಾಗೂ ಆಂಧ್ರಪ್ರದೇಶಗಳಿಂದಲೂ ಲಕ್ಷಾಂತರ ಭಕ್ತರು ಆಗಮಿಸಿದ್ದರು.

<><*<><>*><>

ಗುಡ್ ಫ್ರೈಡೇ ಹಾಗೂ ಈಸ್ಟರ್ ಹಬ್ಬದ ಹಿನ್ನೆಲೆಯಲ್ಲಿ ಪ್ರಯಾಣಿಕರ ಹೆಚ್ಚುವರಿ ದಟ್ಟಣೆ ಕಡಿಮೆ ಮಾಡಲು ನೈಋತ್ಯ ರೈಲ್ವೆಯು ಯಶವಂತಪುರ, ಮಡಗಾಂವ್ ಮತ್ತು ಬೆಂಗಳೂರು ಕಂಟೋನ್ಮೆಂಟ್ ನಡುವೆ ವಿಶೇಷ ರೈಲುಗಳನ್ನು ಓಡಿಸಲು ನಿರ್ಧರಿಸಿದೆ. ರೈಲು ಸಂಖ್ಯೆ ೦೬೨೮೧ ಯಶವಂತಪುರ-ಮಡಗಾಂವ್ ವಿಶೇಷ ಎಕ್ಸ್‌ಪ್ರೆಸ್ ಏಪ್ರಿಲ್ ೨ರಂದು ರಾತ್ರಿ ೧೧.೫೫ಕ್ಕೆ ಯಶವಂತಪುರದಿಂದ ಹೊರಟು, ಏಪ್ರಿಲ್ ೩ರಂದು ಸಂಜೆ ೫.೩೦ ಕ್ಕೆ ಮಡಗಾಂವ್ ತಲುಪಲಿದೆ. ಏಪ್ರಿಲ್ ೫ರಂದು ಬೆಳಿಗ್ಗೆ ೧೧ ಗಂಟೆಗೆ ಮಡಗಾಂವ್ ನಿಂದ ಹೊರಡಲಿರುವ ಈ ರೈಲು, ಏಪ್ರಿಲ್ ೬ರಂದು ಬೆಳಗಿನ ಜಾವ ೫.೨೦ಕ್ಕೆ ಬೆಂಗಳೂರು ಕಂಟೋನ್ಮೆಂಟ್ ತಲುಪಲಿದೆ. ಈ ವಿಶೇಷ ರೈಲುಗಳು ಮಾರ್ಗ

ಮಧ್ಯೆ ಕುಣಿಗಲ್, ಚನ್ನರಾಯಪಟ್ಟಣ, ಹಾಸನ, ಸಕಲೇಶಪುರ, ಸುಬ್ರಹ್ಮಣ್ಯ ರೋಡ್, ಕಬಕ-ಪುತ್ತೂರು, ಬಂಟ್ವಾಳ, ಸುರತ್ಕಲ್, ಮುಲ್ಕಿ, ಉಡುಪಿ, ಬಾರ್ಕೂರು, ಕುಂದಾಪುರ, ಬೈಂದೂರು, ಭಟ್ಕಳ, ಮುರ್ಡೇಶ್ವರ, ಹೊನ್ನಾವರ, ಕುಮಟಾ, ಗೋಕರ್ಣ ರೋಡ್, ಅಂಕೋಲಾ, ಕಾರವಾರ ಮತ್ತು ಕಾಣಕೋಣ ನಿಲ್ದಾಣಗಳಲ್ಲಿ ನಿಲುಗಡೆ ಇರಲಿದೆ.

**<><*<><>*><>**

ಮಕ್ಕಳು ಸಾಹಿತ್ಯ ಕಾರ್ಯಕ್ರಮಗಳಲ್ಲಿ ಭಾಗವಹಿಸುವುದರಿಂದ ತಕ್ಷಣಕ್ಕೆ ಲಾಭ ಸಿಗದಿರಬಹುದು. ಆದರೆ ಮುಂದಿನ ದಿನಗಳಲ್ಲಿ ಮಕ್ಕಳ ವ್ಯಕ್ತಿತ್ವ ಬೆಳೆಯಲಿದೆ ಎಂದು ಮೈಸೂರು ವಿಶ್ವವಿದ್ಯಾಲಯದ ವಿಶ್ರಾಂತ ಕುಲಪತಿ ಡಾ. ಸಬಿಹಾ ಭೂಮಿಗೌಡ ಅಭಿಪ್ರಾಯಪಟ್ಟಿದ್ದಾರೆ. ಧಾರವಾಡದ ಕರ್ನಾಟಕ ವಿದ್ಯಾವರ್ಧಕ ಸಂಘದಲ್ಲಿ ಧಾರವಾಡದ ಕನ್ನಡ ಸಾಹಿತ್ಯ ಪರಿಷತ್ ಆಯೋಜಿಸಿರುವ ಜಿಲ್ಲೆಯ ೧೮ನೇ ಕನ್ನಡ ಸಾಹಿತ್ಯ ಸಮ್ಮೇಳನ ಉದ್ಘಾಟಿಸಿ ಅವರು ಮಾತನಾಡಿದರು. ಮಕ್ಕಳು ಸಾಹಿತ್ಯ ಅಭಿರುಚಿ ಬೆಳೆಸಿಕೊಳ್ಳಬೇಕು ಹಾಗೂ ಹೆಚ್ಚು ಹೆಚ್ಚಾಗಿ ಕಾರ್ಯಕ್ರಮಗಳಲ್ಲಿ ಭಾಗವಹಿಸಬೇಕು ಎಂದು ಕರೆ ನೀಡಿದ್ದಾರೆ. ಕನ್ನಡ ಸಾಹಿತ್ಯ ಪರಿಷತ್ ಜಿಲ್ಲಾಧ್ಯಕ್ಷ ಲಿಂಗರಾಜ ಅಂಗಡಿ ಮಾತನಾಡಿ, ಸರಕಾರ ಜಿಲ್ಲಾ ಸಾಹಿತ್ಯ ಪರಿಷತ್‌ಗೆ ಕೊಡಬೇಕಿರುವ ಅನುದಾನವನ್ನು ಬಿಡುಗಡೆ ಮಾಡುತ್ತಿಲ್ಲ. ಇದರಿಂದ ಕನ್ನಡ ಚಟುವಟಿಕೆಗಳಿಗೆ ತೀವ್ರ ಹಿನ್ನಡೆ ಆಗುತ್ತಿದೆ ಎಂದು ಕಳವಳ ವ್ಯಕ್ತಪಡಿಸಿದ್ದಾರೆ.

**<><*<><>*><>**

ಚಿಕ್ಕಮಗಳೂರು ಜಿಲ್ಲೆ ಕಡೂರು ಪಟ್ಟಣದಲ್ಲಿ ಎಪ್ರಿಲ್ ೧೦ ರಿಂದ ೧೨ರ ವರೆಗೆ ಒಟ್ಟು ೩ ದಿನಗಳ ಕಾಲ ೨೧ ನೇ ಜಿಲ್ಲಾ ಮಟ್ಟದ ಕನ್ನಡ ಸಾಹಿತ್ಯ ಸಮ್ಮೇಳನ ನಡೆಯಲಿದೆ. ಸಮ್ಮೇಳನದ ಸ್ವಾಗತ ಸಮಿತಿ ಅಧ್ಯಕ್ಷ ಭಂಡಾರಿ ಶ್ರೀನಿವಾಸ್ ಮಾತನಾಡಿ, ಸಾಹಿತಿ ಎಂ. ಜಯಮ್ಮ ಅವರನ್ನು ಸಮ್ಮೇಳನದ ಅಧ್ಯಕ್ಷರನ್ನಾಗಿ ಆಯ್ಕೆ ಮಾಡಲಾಗಿದೆ. ಏಪ್ರಿಲ್ ೧೧ ರಂದು ಸಾಹಿತಿ ಬರಗೂರು ರಾಮಚಂದ್ರಪ್ಪ ಎರಡನೆ ದಿನದ ಕಾರ್ಯಕ್ರಮ ಉದ್ಘಾಟಿಸಲಿದ್ದಾರೆ ಎಂದು ಮಾಹಿತಿ ನೀಡಿದ್ದಾರೆ. ೩ ದಿನಗಳ ಕಾಲ ಹಲವು ಗೋಷ್ಠಿಗಳು, ಉಪನ್ಯಾಸಗಳು ಸೇರಿ ಅನೇಕ ಕಾರ್ಯಕ್ರಮಗಳು ನಡೆಯಲ್ಲಿವೆ ಎಂದು ತಿಳಿಸಿದ್ದಾರೆ.

**<>><>< ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು ><><<>**

**<>><><ನಮ್ಮ ಮುಂದಿನ ವಾರ್ತಾ ಪ್ರಸಾರ ಸಂಜೆ ೬.೪೦ ಕ್ಕೆ ><><<>**